14

## ಕರ್ನಾಟಕ ಸರ್ಕಾರದ ನಡವಳಿಗಳು

**. 2014ರ ಮುಂಗಾರು ಹಂಗಾಮಿನಲ್ಲಿ ರಾಜ್ಯದಲ್ಲಿ ಮಾರ್ಪಡಿಸಿದ ರಾಷ್ಟ್ರೀಯ ಕೃಷಿ ವಿಮಾ ಯೋಜನೆ ಅಡಿ ಎಲ್ಲಾ ವರ್ಗದ ರೈತರು ಭಾಗವಹಿಸಲು ಕೊನೆಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ**

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ:ಕೃಇ/45/ಕೃಉಇ/2014, ಬೆಂಗಳೂರು; ದಿನಾಂಕ: 13-5-2014.
2) ಕೃಷಿ ನಿರ್ದೇಶಕರ ಪತ್ರದ ಸಂಖ್ಯೆ:ಬೆವಿಘ/ತಾಂ-1/1/ಅಧಿಸೂಚನೆ/2014-15; ದಿನಾಂಕ:28-6-2014.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ 2014ರ ಮುಂಗಾರು ಹಂಗಾಮಿನಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಮಾರ್ಪಡಿಸಿದ ರಾಷ್ಟ್ರೀಯ ಕೃಷಿ ವಿಮಾ ಯೋಜನೆಯನ್ನು ಅಧಿಸೂಚಿಸಲಾಗಿರುತ್ತದೆ. ಸದರಿ ಸರ್ಕಾರಿ ಆದೇಶದ ಪುಟ ಸಂಖ್ಯೆ 4ರಲ್ಲಿಯ ಕಂಡಿಕೆ 10 ಮತ್ತು 11ರಲ್ಲಿ ಬೆಳೆ ಸಾಲ ಪಡೆದ ಮತ್ತು ಬೆಳೆ ಸಾಲ ಪಡೆಯದ ರೈತರಿಗೆ ಯೋಜನೆಯಡಿ ಭಾಗವಹಿಸಲು ಕೊನೆಯ ದಿನಾಂಕವನ್ನು 30-6-2014 ಎಂದು ನಿಗಧಿಪಡಿಸಲಾಗಿರುತ್ತದೆ.

ಆದರೆ, ಮಾರ್ಪಡಿಸಿದ ರಾಷ್ಟ್ರೀಯ ಕೃಷಿ ವಿಮಾ ಯೋಜನೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರಥಮ ಬಾರಿಗೆ ಅನುಷ್ಠಾನಗೊಳಿಸಲಾಗುತ್ತಿದ್ದು, ರೈತರಿಗೆ ಯೋಜನೆಯ ಬಗ್ಗೆ ಅರಿವು ಮೂಡಿಸಲು ಹೆಚ್ಚಿನ ಕಾಲಾವಕಾಶ ಬೇಕಿರುವುದರಿಂದ ಮತ್ತು ವಿಳಂಬ ಮುಂಗಾರಿನಿಂದ ಬಿತ್ತನೆ ಚಟುವಟಿಕೆ ಅವಧಿಯು ಮುಂದೂಡಲ್ಪಟ್ಟಿರುವುದರಿಂದ ರಾಜ್ಯಮಟ್ಟದ ಬೆಳೆ ವಿಮಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷರಾದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರವರಿಗೆ ಕೊನೆಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ ಕೋರಲಾಗಿ, 2014ರ ಮುಂಗಾರು ಹಂಗಾಮಿಗೆ ಮಾರ್ಪಡಿಸಿದ ರಾಷ್ಟ್ರೀಯ ಕೃಷಿ ವಿಮಾ ಯೋಜನೆಯಡಿ ಎಲ್ಲಾ ವರ್ಗದ ರೈತರು ಭಾಗವಹಿಸಲು ಕೊನೆಯ ದಿನಾಂಕವನ್ನು **31-7-2014ರವರೆಗೆ ವಿಸ್ತರಿಸಲು ಅನುಮೋದನೆಯನ್ನು ನೀಡಿರುತ್ತಾರೆ** ಎಂದು ಕೃಷಿ ನಿರ್ದೇಶಕರು ಮೇಲೆ ಓದಲಾದ ಕ್ರಮಾಂಕ (2)ರಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಿ ಸೂಕ್ತ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಕೃಇ/45/ಕೃಉಇ/2014, ಬೆಂಗಳೂರು; ದಿನಾಂಕ:28-06-2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳು ಮತ್ತು ವಿಳಂಬ ಮುಂಗಾರಿನಿಂದ ಬಿತ್ತನೆ ಚಟುವಟಿಕೆ ಅವಧಿಯು ಮುಂದೂಡಲ್ಪಟ್ಟಿರುವ ಹಿನ್ನೆಲೆಯಲ್ಲಿ, 2014ರ ಮುಂಗಾರು ಹಂಗಾಮಿನಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಮಾರ್ಪಡಿಸಿದ ರಾಷ್ಟ್ರೀಯ ಕೃಷಿ ವಿಮಾ ಯೋಜನೆಯಡಿ ಎಲ್ಲಾ ವರ್ಗದ ರೈತರು ಭಾಗವಹಿಸಲು ಕೊನೆಯ ದಿನಾಂಕವನ್ನು 31-07-2014ರವರೆಗೆ ಮುಂದೂಡಲು ಮತ್ತು ನಿಗಧಿಪಡಿಸಲು ಸರ್ಕಾರದ ಮಂಜೂರಾತಿಯನ್ನು ಈ ಮೂಲಕ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

ಗೆ,
1) ಮಹಾಲೇಖಪಾಲರು, ಬೆಂಗಳೂರು.

2) ರಾಜ್ಯದ ಬೆಳೆ ವಿಮಾ ಸಮಿತಿಯ ಎಲ್ಲಾ ಸದಸ್ಯರಿಗೆ.
3) ಕೃಷಿ ಆಯುಕ್ತರು, ಬೆಂಗಳೂರು.
4) ಕೃಷಿ ನಿರ್ದೇಶಕರು, ಬೆಂಗಳೂರು.
5) ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬೆಂಗಳೂರು.
6) ನಿರ್ದೇಶಕರು (ಪಿಎಫ್‌ಡಿ), ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
7) ಎಲ್ಲಾ ಜಿಲ್ಲಾಧಿಕಾರಿಗಳು.
8) ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.
9) ಎಲ್ಲಾ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು.
10) ಎಲ್ಲಾ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು.
11) ಎಲ್ಲಾ ಲೀಡ್ ಬ್ಯಾಂಕುಗಳು.
12) ಎಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳು.
13) ಎಲ್ಲಾ ಪ್ರಾದೇಶಿಕ ಗ್ರಾಮೀಣ ಬ್ಯಾಂಕುಗಳು.
14) ಎಲ್ಲಾ ನೋಡಲ್ ಬ್ಯಾಂಕುಗಳು.
15) ಪ್ರಾದೇಶಿಕ ವ್ಯವಸ್ಥಾಪಕರು, ಅಗ್ರಿಕಲ್ಚರ್ ಇನ್ಸೂರೆನ್ಸ್ ಕಂಪನಿ ಆಫ್ ಇಂಡಿಯಾ ಲಿಮಿಟೆಡ್, ಕರ್ನಾಟಕ ಪ್ರಾದೇಶಿಕ ಕಛೇರಿ, ಕರ್ನಾಟಕ ಪ್ರದೇಶ ಕೃಷಿಕ ಸಮಾಜ, ನಂ.18, 3ನೇ ಮಹಡಿ, ನೃಪತುಂಗ ರಸ್ತೆ, ಹಡ್ಸನ್ ವೃತ್ತ, ಬೆಂಗಳೂರು.
16) ಪ್ರಾದೇಶಿಕ ವ್ಯವಸ್ಥಾಪಕರು, ಐ.ಸಿ.ಐ.ಸಿ.ಐ. ಲೊಂಬಾರ್ಡ್ ಜನರಲ್ ಇನ್ಸೂರೆನ್ಸ್ ಕಂಪನಿ ಲಿ, 2ನೇ ಮಹಡಿ, ಕೃಷ್ಣ ಗ್ರ್ಯಾಂಡ್, ಹೊರ ವರ್ತುಲ ರಸ್ತೆ, ಮಾರತಹಳ್ಳಿ, ಬೆಂಗಳೂರು –560 037.
17) ಪ್ರಾದೇಶಿಕ ವ್ಯವಸ್ಥಾಪಕರು, ಹೆಚ್.ಡಿ.ಎಫ್.ಸಿ. ಎರ್ಗೊ ಜನರಲ್ ಇನ್ಸೂರೆನ್ಸ್ ಕಂಪನಿ ಲಿ, ನಂ.25/1, 2ನೇ ಮಹಡಿ, ಶಂಕರನಾರಾಯಣ ಬಿಲ್ಡಿಂಗ್, 2ನೇ ಬಿಲ್ಡಿಂಗ್, ಎಂ.ಜಿ. ರಸ್ತೆ, ಬೆಂಗಳೂರು –560 001.
18) ಪ್ರಾದೇಶಿಕ ವ್ಯವಸ್ಥಾಪಕರು, ಇಫ್ಕೋ ಟೋಕಿಯೊ ಜನರಲ್ ಇನ್ಸೂರೆನ್ಸ್ ಕಂಪನಿ ಲಿ, 5ನೇ ಮಹಡಿ, ಶ್ರೀ ಶಾಂತಿ ಟವರ್ಸ್, 3ನೇ ಮುಖ್ಯ ರಸ್ತೆ, ನಂ.141, ಪೂರ್ವ ಎನ್.ಜಿ.ಇ.ಎಫ್. ಲೇ ಔಟ್, ಕಸ್ತೂರಿ ನಗರ, ಬೆಂಗಳೂರು –84.
19) ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ –4), ಬೆಂಗಳೂರು.
20) ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ, ಬೆಂಗಳೂರು.
21) ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
22) ಕಂಪೈಲರ್, ಕರ್ನಾಟಕ ಗೆಜೆಟ್, ಬೆಂಗಳೂರು, ಇವರು ಇದನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕ್ರಮ ತೆಗೆದುಕೊಳ್ಳುವುದು.
23) ರಕ್ಷಾ ಕಡತ : ಹೆಚ್ಚುವರಿ ಪ್ರತಿ.

(ಕ್ರಮ ಸಂಖ್ಯೆ: 7 ರಿಂದ 10 ರವರೆಗೆ ಕೃಷಿ ನಿರ್ದೇಶಕರ ಮೂಲಕ ಹಾಗೂ
ಕ್ರಮ ಸಂಖ್ಯೆ: 11 ರಿಂದ 14 ರವರೆಗೆ ವಿಮಾ ಸಂಸ್ಥೆಯ ಮೂಲಕ)